**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.1023/2025**

| | | |
|---|---|---|
| ಸಾಕ್ಷಿದಾರರ ಹೆಸರು | : ವಿಶ್ವನಾಥ | ಪ್ರಾಸಾ-2 |
| ತಂದೆಯ ಹೆಸರು | : ಲೇಟ್ ಚಲ್ಲ | ಚಾಸಾ-3 |
| ವಯಸ್ಸು | : 45 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 09.01.2026. |
| ವಾಸಸ್ಥಳ | : ಹೊಸಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1, 2 ಮತ್ತು 4 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.18.03.2025 ರಂದು ಬರವಣಿಗೆ ಮಾಡಲಾದ ಮಹಜರ್ ಪ್ರತಿ ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ಪ್ರತಿಯನ್ನು ನಿಪಿ-2 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ 2 ಫೋಟೋವನ್ನು ತೋರಿಸಲಾಗಿ ಅದರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ್ದು, ಸದರಿ ಫೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ನಾನು ಮೇಲೆ ಗುರುತಿಸಿರುವ ಸಹಿಯನ್ನು ಕಳೆದ ವರ್ಷ ಮಾರ್ಚ್ ತಿಂಗಳಿನಲ್ಲಿ ಚಾಸಾ-2 ರವರು ಮರದಿಂದ ಕೆಳಗೆ ಬಿದ್ದಿರುವ ಕುರಿತು ಪೋಲಿಸರು ಬಕ್ಕೀ ಗ್ರಾಮದ ಆರೋಪಿಯ ತೋಟಕ್ಕೆ ಬಂದ ಸಮಯದಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಅಂದಾಜು 12.45 ರಿಂದ 1.00 ರ ಸಮಯದಲ್ಲಿ ಮಾಡಿರುತ್ತೇನೆ. ನಂತರ ಪೋಲಿಸರು ಸದರಿ ಸ್ಥಳದಲ್ಲಿ ಬರವಣಿಗೆ ಮಾಡಿರುತ್ತಾರೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಮಯದಲ್ಲಿ ನಾನು, ಚಾಸಾ-8 ಮತ್ತು ಚಾಸಾ-4 ರವರು ಹಾಜರಿರುತ್ತೇವೆ. ಸದರಿ ಸಮಯದಲ್ಲೇ ನಿಪಿ-3 ಮತ್ತು 4 ನ್ನು ತೆಗೆಯಲಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.18.03.2025 ರಂದು ನಾನು ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಆ ದಿನ ಚಾಸಾ-8 ರವರು ಸ್ಥಳ ತೋರಿಸಿದ ಮೇರೆಗೆ ನಿಪಿ-2 ರ ಬರವಣಿಗೆ ಮಾಡಿಕೊಂಡಿರುತ್ತಾರೆ ಎಂದರೆ ಸರಿ.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ ಎನ್.ಸಿ. ವಕೀಲರಿಂದಃ</u>**

ನಾನು ಯಾವುದೇ ವಿದ್ಯಾಭ್ಯಾಸವನ್ನು ಪಡೆದುಕೊಂಡಿರುವುದಿಲ್ಲ. ನಾನು ಬಾಳೆಹಳ್ಳಿ ಮತ್ತು ಬಕ್ಕಿಯ ಗ್ರಾಮದಲ್ಲಿ ಹಲವು ಕಡೆ ಅಡಿಕೆ ಕೆಲಸ ಮಾಡಿರುತ್ತೇನೆ. ನನಗೆ ಪೋಲಿಸರು ಯಾವುದೇ ನೋಟೀಸು ನೀಡಿರುವುದಿಲ್ಲ ಎಂದರೆ ಸರಿ. ನನ್ನನ್ನು ಆ ದಿನ ಪೋಲಿಸರೇ ಮಹಜರ್ ಕ್ರಮಕ್ಕೆ ಕರೆದುಕೊಂಡು ಹೋಗಿರುತ್ತಾರೆ. ನಾನು ಸ್ಥಳಕ್ಕೆ ಹೋಗುವಷ್ಟರಲ್ಲಿ ಪೋಲಿಸರು ಸ್ಥಳದಲ್ಲಿ ಇದ್ದರು ಎಂದರೆ ಸರಿ. ಚಾಸಾ-1 ಮತ್ತು 2 ರವರೊಟ್ಟಿಗೆ ನಾವು ಕೆಲಸ ಮಾಡುತ್ತೇವೆ. ಹಲವು ವರ್ಷಗಳಿಂದ ಅವರೊಟ್ಟಿಗೆ ಒಳ್ಳೆಯ ಒಡನಾಟವಿರುತ್ತದೆ. ನನಗೆ ಓದಲು ಮತ್ತು ಬರೆಯಲು ಬಾರದೇ ಇದ್ದ ಕಾರಣ ನಿಪಿ-2 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇರುವುದಿಲ್ಲ. ಪೋಲಿಸರು ನಿಪಿ-2 ರ ಬರವಣಿಗೆ ಮಾಡಿದ ನಂತರ ಓದಿ ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ಚಾಸಾ-2 ರವರು ಬಿದ್ದು ಪೆಟ್ಟು ಮಾಡಿಕೊಂಡಿರುವ ಬಗ್ಗೆ ನನಗೆ ಮಾಹಿತಿ ಇರುತ್ತದೆ ಆದರೆ ದಿನಾಂಕ ನೆನಪಿರುವುದಿಲ್ಲ. ಆ ದಿನ ಚಾಸಾ-2 ರವರು ಕೆಳಗೆ ಬಿದ್ದ ಮರದ ಅಳತೆಯನ್ನು ಪೋಲಿಸರು ನನ್ನ ಮುಂದೆ ಮಾಡಿರುತ್ತಾರೆ. ಸದರಿ ಸ್ಥಳದ ಚೆಕ್ಕುಬಂದಿ ನನಗೆ ತಿಳಿದಿರುವುದಿಲ್ಲ. ಆರೋಪಿಗೆ ಎಷ್ಟು ಜಮೀನಿರುತ್ತದೆ ಮತ್ತು ಎಲ್ಲಿ ಇರುತ್ತದೆ ಎಂದು ನನಗೆ ಮಾಹಿತಿ ಇರುವುದಿಲ್ಲ. ನಾನು ಠಾಣೆಯಲ್ಲಿ ಯಾವುದೇ ಸಹಿಯನ್ನು ಮಾಡಿರುವುದಿಲ್ಲ.

ನಾನು ಎರಡು ಸಹಿಯನ್ನು ಮಾಡಿರುತ್ತೇನೆ, ಒಂದು ತೋಟದಲ್ಲಿ ಮತ್ತು ಮತ್ತೊಂದು ಠಾಣೆಯಲ್ಲಿ ಮಾಡಿರುತ್ತೇನೆ. ಸಾಕ್ಷಿಗೆ ನಿಪಿ-2 ರಲ್ಲಿ ಇರುವ ಸಹಿಯನ್ನು ಎಲ್ಲಿ ಮಾಡಲಾಗಿರುತ್ತದೆ ಎಂದು ಕೇಳಲಾಗಿ ಸಾಕ್ಷಿಯು ಖಚಿತವಾಗಿ ಹೇಳಲು ಸಾಧ್ಯವಿಲ್ಲ ಎಂದು ನುಡಿಯುತ್ತಾರೆ. ನಾನು ಸ್ಥಳಕ್ಕೆ ಹೋಗುವ ಪೂರ್ವದಲ್ಲಿ ಪೋಲಿಸರು ಯಾವುದೇ ಬರವಣಿಗೆ ಮಾಡಿರುವುದಿಲ್ಲ. ನಾನು ಸಹಿ ಮಾಡಿರುವ ಸ್ಥಳ ಯಾರಿಗೆ ಸೇರಿರುತ್ತದೆ ಎಂದು ದಾಖಲೆಗಳನ್ನು ಪರಿಶೀಲಿಸಿರುವುದಿಲ್ಲ. ನನಗೆ ಚಾಸಾ-1 ಮತ್ತು 2 ರವರ ಪರಿಚಯವಿದ್ದ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ವಿಚಾರದ ಮಾಹಿತಿ ಇಲ್ಲದಿದ್ದರೂ ಸಹಾ ಚಾಸಾ-1 ಮತ್ತು 2 ರವರ ಮಾತಿನ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಗುರುತಿಸಿರುವ ಸಹಿಯನ್ನು ಠಾಣೆಯಲ್ಲಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1023/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಬಾಲರಾಜು | ಪ್ರಾಸಾ-3 |
| ತಂದೆಯ ಹೆಸರು | : ರುಕ್ಮಯ್ಯ | ಚಾಸಾ-4 |
| ವಯಸ್ಸು | : 35 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 09.01.2026. |
| ವಾಸಸ್ಥಳ | : ಬಾನಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1 ರಿಂದ 3 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ದಿ.18.03.2025 ರಂದು ಬರವಣಿಗೆ ಮಾಡಲಾದ ಮಹಜರ್ ಪ್ರತಿ ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ಪ್ರತಿಯನ್ನು ನಿಪಿ-2 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ 2 ಫೋಟೋವನ್ನು ತೋರಿಸಲಾಗಿ ಅದರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ್ದು, ಸದರಿ ಫೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ದಿ.18.03.2025 ರಂದು ಆರೋಪಿಯ ತೋಟದಲ್ಲಿ ಮ.12.45 ರಿಂದ 1.15 ರ ಒಳಗೆ ನಿಪಿ-2 ರಲ್ಲಿ ಸಹಿಯನ್ನು ಮಾಡಿರುತ್ತೇನೆ. ಸದರಿ ಸಹಿಯನ್ನು ಚಾಸಾ-2 ರವರು ಮರದಿಂದ ಕೆಳಗೆ ಬಿದ್ದು ಪೆಟ್ಟುಮಾಡಿಕೊಂಡಿರುವ ಬಗ್ಗೆ ಮಾಡಿರುತ್ತೇನೆ. ಆ ದಿನ ಪೋಲಿಸರು ಮಹಜರ್ ಗೆ ಎಂದು ಸ್ಥಳಕ್ಕೆ ಬಂದಿರುತ್ತಾರೆ. ಸದರಿ ಸಮಯದಲ್ಲಿ ಪೋಲಿಸರು ಸ್ಥಳ ಕ್ಕೆ ಭೇಟಿ ನೀಡಿ ಮರವನ್ನು ಪರಿಶೀಲಿಸಿ ಅದರ ಅಳತೆಯನ್ನು ಪಡೆದುಕೊಂಡಿರುತ್ತಾರೆ. ಸದರಿ ಸಮಯದಲ್ಲಿ ಚಾಸಾ-3 ಮತ್ತು 8 ರವರು ಹಾಜರಿರುತ್ತಾರೆ. ನಿಪಿ-3 ಮತ್ತು 4 ನ್ನು ಆರೋಪಿಯ ತೋಟದಲ್ಲಿ ತೆಗೆಯಲಾಗಿರುತ್ತದೆ.

**ಪಾಟೀ ಸವಾಲು: ಆರೋಪಿ ಪರ ಶ್ರೀ ಎನ್.ಸಿ. ವಕೀಲರಿಂದಃ**

ಚಾಸಾ-9 ರವರ ಪರಿಚಯ ನನಗಿರುವುದಿಲ್ಲ ಆದರೆ ಹಲವು ಬಾರಿ ಅವರೊಟ್ಟಿಗೆ ಕೆಲಸಕ್ಕೆ ಹೋಗಿರುತ್ತೇನೆ. ಚಾಸಾ-9 ರವರು ವೃತ್ತಿಯಲ್ಲಿ ಮೇಸ್ತ್ರಿಯಾಗಿರುತ್ತಾರೆ. ಚಾಸಾ-3 ರವರ ಪರಿಚಯ ನನಗಿದೆ. ನಾನು, ಚಾಸಾ-1, 2, 3 ಮತ್ತು 8 ರವರು ಒಟ್ಟಿಗೆ ಕೆಲಸ ಮಾಡುತ್ತೇವೆ. ಮಹಜರ್ ಕ್ರಮಕ್ಕೆ ಹಾಜರಾಗುವಂತೆ ನನಗೆ ಪೋಲಿಸರು ಯಾವುದೇ ನೋಟೀಸು ನೀಡಿರುವುದಿಲ್ಲ. ನಾನು ಹೇಳಿದಂತೆ ಘಟನಾ ಸ್ಥಳದಲ್ಲಿ ಯಾವುದೇ ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ತೋಟ ಯಾರಿಗೆ ಸೇರಿದ್ದಾಗಿರುತ್ತದೆ ಎಂಬುದರ ಬಗ್ಗೆ ಯಾವುದೇ ದಾಖಲಾತಿಗಳನ್ನು ಪರಿಶೀಲಿಸಿರುವುದಿಲ್ಲ. ಮಹಜರ್ ಕ್ರಮ ಜರುಗಿಸಿದ ಸ್ಥಳದ ಚೆಕ್ಕುಬಂದಿಯ

ಬಗ್ಗೆ ಮಾಹಿತಿ ಇರುವುದಿಲ್ಲ. ನಿಪಿ-2 ನ್ನು ಪೋಲಿಸರು ಬರೆದಿರುತ್ತಾರೆ, ಅವರ ಹೆಸರು ತಿಳಿದಿರುವುದಿಲ್ಲ. ಮಹಜರ್ ಜರುಗಿಸಿದ ಸ.ನಂ.130 ಆಗಿರುತ್ತದೆ. ಸದರಿ ಸ.ನಂ. ನ್ನು ನನಗೆ ಚಾಸಾ-8 ರವರು ತಿಳಿಸಿರುತ್ತಾರೆ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮರದ ಅಳತೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಮರದ ಅಳತೆಯ ಬಗ್ಗೆ ನನಗೆ ನೆನಪಾಗುತ್ತಿಲ್ಲ. ನಿಪಿ-2 ಕ್ಕೆ ಒಂದು ಸಹಿಯನ್ನು ಮಾಡಿರುತ್ತೇನೆ. ಮಹಜರ್ ಸಮಯದಲ್ಲಿ ನಾನು ಸ್ಥಳದಲ್ಲಿ ಹಾಜರಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ಕ್ಕೂ, ಈ ಪ್ರಕರಣಕ್ಕೂ ಮತ್ತು ಆರೋಪಿಗೂ ಯಾವುದೇ ಸಂಭಂದ ಇಲ್ಲ ಎಂದರೆ ಸರಿ. ಚಾಸಾ-1 ಮತ್ತು 2 ರವರ ಮಾತಿನ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ಮತ್ತು 2 ರವರ ಮಾತಿನ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.